ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ. 3662/2022

ಸಿ.ಡಬ್ಲ್ಯೂ -05
ಪಿ.ಡಬ್ಲ್ಯೂ-03

ಸಾಕ್ಷಿದಾರನ ಹೆಸರು :- ಕುಮಾರ
ತಂದೆಯ ಹೆಸರು :- ಗೋವಿಂದಪ್ಪ
ವಯಸ್ಸು :- 45 ವರ್ಷ
ಉದ್ಯೋಗ :- ಚಾಲಕ
ವಾಸ :- ಹುಲಿಯೂರುದುರ್ಗ

**ಸಾಕ್ಷಿಗೆ ದಿಃ 22.09.2025 ರಂದು ಪ್ರಮಾಣ ವಚನ ಬೋದಿಸಲಾಯಿತು.**
**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 20.04.2021 ರಂದು ರಾತ್ರಿ 8 ಗಂಟೆಯ ಸಮಯದಲ್ಲಿ ನಾನು ಕೊಡವತ್ತಿ ರಸ್ತೆಯಲ್ಲಿರುವ ದರ್ಶಿತ್ ಬಾರ್ ಮತ್ತು ರೆಸ್ಟೋರೆಂಟ್ ಗೆ ಹೋಗಿ ವಿಸ್ಕಿ ಕುಡಿಯುತ್ತಾ ಕುಳಿತಿರುವಾಗ ಆರೋಪಿ ಸದರಿ ಬಾರಿನಲ್ಲಿ ಕ್ಯಾಷಿಯರ್ ಆಗಿ ಕೆಲಸ ಮಾಡುತ್ತಿದ್ದರು ನನ್ನ ಜೊತೆ ಇನ್ನು 5-6 ಜನ ಮದ್ಯ ಸೇವನೆ ಮಾಡುತ್ತಿದ್ದು ಆರೋಪಿ ನಮಗೆ ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕೆಂಬ ತಿಳುವಳಿಕೆ ನೀಡಿಲ್ಲ ಮತ್ತು ಈ ಬಗ್ಗೆ ಬೋರ್ಡ ಸಹ ಹಾಕಿರಲಿಲ್ಲ. ರಾತ್ರಿ 8.10 ಗಂಟೆಯ ಸಮಯದಲ್ಲಿ ಹು.ದುರ್ಗ ಪೊ. ಅಲ್ಲಿಗೆ ಬಂದು ವಿಡಿಯೋ ಮಾಡಿ ನಮಗೆ ತಿಳುವಳಿಕೆ ನೀಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ನನ್ನ ಹೇಳಿಕೆಯನ್ನುಸಹ ದಿಃ 21.04.2021 ರಂದು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 3 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರು ಸಹ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.